2,500 ಕ್ಕಿಂತಲೂ ಹೆಚ್ಚಿದ್ದಲ್ಲಿ ಅಂತಹ ಸನ್ನದುಗಳನ್ನು ಮುಂದುವರೆಸಿಕೊಂಡು ಹೋಗಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಇಂತಹ ಅಂಗಡಿಗಳನ್ನು ರದ್ದುಪಡಿಸುವ ಉದ್ದೇಶ ಸರ್ಕಾರಕ್ಕೆ ಇಲ್ಲ.

ಇ) ಉದ್ಭವಿಸುವುದಿಲ್ಲ.

ಸಾರಾಯಿ ಗುತ್ತಿಗೆ ಮತ್ತು ಮಾರಾಟದ ವ್ಯವಸ್ಥೆ.

1664(2385) ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) :— ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸರ್ಕಾರದ ಈಗಿರುವ ಸಾರಾಯಿ ಗುತ್ತಿಗೆ ಮತ್ತು ಮಾರಾಟದ ವ್ಯವಸ್ಥೆಯನ್ನು ಬದಲಾಯಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಇದ್ದರೆ ಆ ವ್ಯವಸ್ಥೆಯ ರೂಪುರೇಷೆಗಳೇನು?

ಇ) ಅನಧಿಕೃತ ಸಾರಾಯಿ ಅಂಗಡಿಗಳನ್ನು ಮುಚ್ಚಿಸುವ ಕಾರ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಆಗಿರುವ ಪ್ರಗತಿ ಎಷ್ಟು?

ಶ್ರೀ ಜಯವಂತ ಸುಬ್ರಾಯ (ಅಬಕಾರಿ ರಾಜ್ಯ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) 1998-99ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟಾರೆ 566 ಅನಧಿಕೃತ ಸಾರಾಯಿ ಅಂಗಡಿಗಳು ಕಂಡು ಬಂದಿದ್ದು, ಅವುಗಳನ್ನು ಮುಚ್ಚಿಸಲಾಗಿರುತ್ತದೆ.

ರಾಜ್ಯದ ಸಚಿವರುಗಳು ಪಡೆದುಕೊಂಡಿರುವ ಪ್ರವಾಸಭತ್ಯೆಗಳು.

1665(2362) ಶ್ರೀ ಯು.ಆರ್. ಸಭಾಪತಿ (ಉಡುಪಿ) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

(1) 1998-99ನೇ ಸಾಲಿನಲ್ಲಿ ರಾಜ್ಯದ ಸಚಿವರುಗಳು ಪಡೆದುಕೊಂಡಿರುವ ಪ್ರವಾಸಭತ್ಯೆದ ಒಟ್ಟು ಮೊಬಲಗೆಷ್ಟು? (ಪ್ರತ್ಯೇಕ ವಿವರ ನೀಡುವುದು)

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿಗಳು) :—

(1) ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.